## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆ.ಎಸ್.ಎಸ್.ಐ.ಡಿ.ಸಿ./ಕೆ.ಐ.ಎ.ಡಿ.ಬಿ., ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು/ಪ್ರದೇಶಗಳಲ್ಲಿ ನಿವೇಶನಗಳನ್ನು ವಿವಿಧ ವರ್ಗದ ಕೈಗಾರಿಕೋದ್ಯಮಿಗಳಿಗೆ ಮೀಸಲಾತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಕೈಅ/ಇ1/1455/2016-17, ದಿ: 15.04.2016.
2. ಸರ್ಕಾರದ ಆದೇಶ ಸಂ: ಸಿಐ 148 ಸಿಎಸ್‌ಸಿ 2015, ದಿ: 27.06.2015.

****

**ಪ್ರಸ್ತಾವನೆ:**

2016-17ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ 379ರಲ್ಲಿ "2014ರಲ್ಲಿ ತರಲಾದ ಕೈಗಾರಿಕಾ ನೀತಿಯಲ್ಲಿ ಕೆಐಎಡಿಬಿ ಸಂಸ್ಥೆಯು ಅಭಿವೃದ್ಧಿಪಡಿಸುವ ಕೈಗಾರಿಕಾ ಶೆಡ್/ನಿವೇಶನಗಳಲ್ಲಿ ಶೇ.5ರಷ್ಟನ್ನು ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ, ಅಲ್ಪಸಂಖ್ಯಾತರಿಗೆ, ಅಂಗವಿಕಲರಿಗೆ ಮತ್ತು ಮಾಜಿ ಸೈನಿಕರಿಗೆ ಮೀಸಲಿರಿಸಲಾಗಿದ್ದು, ಇದನ್ನು ಶೇ.5 ರಿಂದ 10ಕ್ಕೆ ಹೆಚ್ಚಿಸಲಾಗುವುದು. ಈ ಮೀಸಲಾತಿಯನ್ನು ಕೆಐಎಡಿಬಿ ಮತ್ತು ಕೆಎಸ್‌ಎಸ್‌ಐಡಿಸಿ ಸಂಸ್ಥೆಗಳು ಅಭಿವೃದ್ಧಿಪಡಿಸಿ ಹಂಚಿಕೆ ಮಾಡುವ ಕೈಗಾರಿಕಾ ಶೆಡ್/ನಿವೇಶನಗಳಿಗೆ ಅನ್ವಯಿಸಲಾಗುವುದು. ಈ ಮೊತ್ತವನ್ನು 6 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಬಹುದಾಗಿರುತ್ತದೆ"** ಎಂದು ಘೋಷಿಸಲಾಗಿದೆ. ಅದರಂತೆ, ವಿವಿಧ ವರ್ಗದ ಸಮುದಾಯಕ್ಕೆ ಸೇರಿದ ಕೈಗಾರಿಕೋದ್ಯಮಿಗಳಿಗೆ ಕೈಗಾರಿಕಾ ಪ್ರದೇಶ/ವಸಾಹತುಗಳಲ್ಲಿ ನಿವೇಶನ/ಶೆಡ್‌ಗಳ ಹಂಚಿಕೆಯಲ್ಲಿ ಮೀಸಲಾತಿ ನೀಡುವ ಕುರಿತು, ಓದಲಾದ ಕ್ರಮಾಂಕ (2) ರ ಸರ್ಕಾರಿ ಆದೇಶದಲ್ಲಿ ಮೀಸಲಾತಿಯ ಪ್ರಮಾಣವನ್ನು ನಿಗದಿಪಡಿಸಲಾಗಿದ್ದು, ಈ ಮೀಸಲಾತಿಯ ಆದೇಶಕ್ಕೆ ಸೂಕ್ತ ತಿದ್ದುಪಡಿಗಳನ್ನು ತಂದು 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾದಂತೆ ಮೀಸಲಾತಿ ಪ್ರಮಾಣವನ್ನು ಪರಿಷ್ಕರಿಸುವ ಕುರಿತು ಆಯುಕ್ತರು, ಕೈಗಾರಿಕಾಭಿವೃದ್ಧಿ ಇವರು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಮುಂದಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 82 ಸಿಎಸ್‌ಸಿ 2016, ಬೆಂಗಳೂರು, ದಿನಾಂಕ: 05.05.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಹೊಸ ಕೈಗಾರಿಕಾ ನೀತಿ 2014-19ರಲ್ಲಿ ಘೋಷಿಸಿರುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ)

ವತಿಯಿಂದ ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶದಲ್ಲಿ ಹಂಚಿಕೆಗೆ ಅರ್ಹವಿರುವ ನಿವೇಶನಗಳ ಒಟ್ಟು ವಿಸ್ತೀರ್ಣದಲ್ಲಿ ಕನಿಷ್ಠ ಶೇ. 20ರಷ್ಟು ಭಾಗವನ್ನು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವರ್ಗದ (ಎಂಎಸ್ಎಂಇ) ಉದ್ದಿಮೆಗಳಿಗೆ ಮೀಸಲಿಡತಕ್ಕದ್ದು.

ಮುಂದುವರೆದು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ (ಕೆಎಸ್ಎಸ್ಐಡಿಸಿ) ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶ/ ವಸಾಹತುಗಳಲ್ಲಿನ ನಿವೇಶನ / ಶೆಡ್‌ಗಳ ಹಂಚಿಕೆಯಲ್ಲಿ ಈ ಕೆಳಕಂಡಂತೆ ಶೇಕಡವಾರು ಮೀಸಲಾತಿಯನ್ನು ಅನುಸರಿಸಿ ಹಂಚಿಕೆ ಮಾಡತಕ್ಕದೆಂದು ಆದೇಶಿಸಲಾಗಿದೆ.

- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಮಹಿಳಾ ಉದ್ದಿಮೆದಾರರಿಗೆ ಕನಿಷ್ಠ ಶೇ. 5ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಉದ್ದಿಮೆದಾರರಿಗೆ ಕನಿಷ್ಠ ಶೇ. 22.50ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ವರ್ಗ-1 ಮತ್ತು 2ಎ), ವಿಕಲಚೇತನ ಹಾಗೂ ಮಾಜಿ ಸೈನಿಕ ಉದ್ದಿಮೆದಾರರಿಗೆ ಕನಿಷ್ಠ ಶೇ. 10ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು ಹಾಗೂ ಈ ವರ್ಗದ ಉದ್ದಿಮೆದಾರರು ನಿವೇಶನ/ *ಶೆಡ್‌ಗಳ ಮೊತ್ತವನ್ನು 6 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸತಕ್ಕದ್ದು.*

ಈ ಹಿಂದೆ ವಿವಿಧ ವರ್ಗಗಳ ಸಮುದಾಯದ ಉದ್ದಿಮೆದಾರರಿಗೆ ಮೀಸಲಾತಿ ನಿರ್ಧರಿಸುವ ಕುರಿತು ಹೊರಡಿಸಲಾದ ಸರ್ಕಾರಿ ಆದೇಶ ಸಂ: ಸಿಐ 148 ಸಿಎಸ್‌ಸಿ 2015, ದಿ: 27.06.2015 ಅನ್ನು ಹಿಂಪಡೆಯಲಾಗಿದೆ. ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಈ ಮೀಸಲಾತಿ ಆದೇಶವನ್ನು ತತ್‌ಕ್ಷಣದಿಂದ ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
05.05.2016
(ಎಲ್.ಎಸ್. ಶ್ರೀಕಂಠಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಲಾಗಿದೆ.

<u>ಪ್ರತಿಯನ್ನು:</u>

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.